ಅ) ಇಲ್ಲ

ಆ) ಉದ್ಭವಿಸುವುದಿಲ್ಲ

ಶಿಶುವಿನ ಹಾಳ ಶರೀಫ್ ಶಿವಯೋಗಿ ಸುಕ್ಷೇತ್ರವನ್ನು ಪ್ರವಾಸಿ ಕೇಂದ್ರ ಎಂದು ಪರಿಗಣಿಸುವುದು

593. ಶ್ರೀ ಮಂಜುನಾಥ ಸಿ. ಕುನ್ನೂರ (ಶಿಗ್ಗಾಂವ) : ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶಿಗ್ಗಾಂವ ತಾಲ್ಲೂಕ್ ಶಿಶುವಿನಹಾಳ ಶರೀಫ್ ಶಿವಯೋಗಿ ಸುಕ್ಷೇತ್ರವನ್ನು ಪ್ರವಾಸಿ ಅಭಿವೃದ್ಧಿ ಕೇಂದ್ರವನ್ನಾಗಿ ಪರಿಗಣಿಸುವ ಉದ್ದೇಶವೇನಾದರೂ ಸರ್ಕಾರದವರ ಮುಂದಿದೆಯೆ?

ಆ) ಹಾಗಿದ್ದಲ್ಲಿ, ಇನ್ನು ಎಷ್ಟು ದಿವಸಗಳಲ್ಲಿ ಈ ಕೆಲಸ ಕೈಗೆತ್ತಿಕೊಳ್ಳಲಾಗುವುದು?

ಶ್ರೀ ಎಸ್. ಬಂಗಾರಪ್ಪ (ಮುಖ್ಯ ಮಂತ್ರಿಗಳು):–

ಅ) ಇಲ್ಲ

ಆ) ಉದ್ಭವಿಸುವುದಿಲ್ಲ.

ದೇವದಾಸಿಯರ ಪುನರ್‌ವಸತಿ ಕುರಿತು

510. ಶ್ರೀ ಮಲ್ಲಾರಿ ಗೌಡ ಎಸ್. ಪಾಟೀಲ್ (ಸಂಕೇಶ್ವರ) : ಮಾನ್ಯ ಕಾನೂನು ಮತ್ತು ಸಮಾಜ ಕಲ್ಯಾಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ದೇವದಾಸಿಯರ ಸಂಖ್ಯೆ ಎಷ್ಟು? (ಜಿಲ್ಲಾವಾರು ವಿವರ ನೀಡಬೇಕು)

ಆ) ದೇವದಾಸಿಯರ ಪುನರ್‌ವಸತಿಗಾಗಿ ಕಾರ್ಯಕ್ರಮಗಳೇನು?

ಇ) ದೇವದಾಸಿಯರಿಗೆ ಮೂಢನಂಬಿಕೆಗಳಿಂದ ಹಾಗೂ ದುರ್ನಡತೆಯಿಂದ ವಿಮುಕ್ತಿಹೊಂದಲು ಮಾನಸಿಕ ಪರಿವರ್ತನೆ ಮಾಡುವ ಕಾರ್ಯಕ್ರಮಗಳೇನು?

ಈ) ರಾಜ್ಯಾದ್ಯಂತ ಪುನರ್‌ವಸತಿ ಕೇಂದ್ರಗಳ ಸಂಖ್ಯೆ ಎಷ್ಟು?

ಶ್ರೀ ಬಿ. ಶಿವಣ್ಣ (ಕಾನೂನು, ಸಮಾಜ ಕಲ್ಯಾಣ ಸಚಿವರು):–

ಅ) 1989–90 ನೇ ಸಾಲಿನ ಸಮೀಕ್ಷೆಯ ಪ್ರಕಾರ ಒಟ್ಟು ಸಂಖ್ಯೆ 14197

ಬೆಳಗಾಂ	:	3737
ಬಿಜಾಪುರ	:	4895
ಧಾರವಾಡ	:	2503
ರಾಯಚೂರು	:	1089
ಗುಲ್ಬರ್ಗ	:	318
ಬಳ್ಳಾರಿ	:	1635
ಬೀದರ್	:	20
ಒಟ್ಟು	:	14197